# ಹಿಂಬರಹ

ಸಂಖ್ಯೆ: ಡಿಟಿಇ 1 ಇಎಸ್‌ಟಿ(9) 2016 / 4470. ದಿನಾಂಕ: 02-02-2016

ದಿನಾಂಕ:5.01.2017 ರ ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 63 ಎಸ್‌ಆರ್‌ಸಿ 2015 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
4. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 63 ಸೇನಿಸಿ 2015

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 05.01.2017

# ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966 ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ:22.11.2016ರ ಅಧಿಸೂಚನೆ ಸಂಖ್ಯೆ:ಸಿಆಸುಇ 63 ಸೇನಿಸಿ 2015ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯ ಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ:22.11.2016ರ ಕರ್ನಾಟಕ ರಾಜ್ಯ ಪತ್ರದ ವಿಶೇಷ ರಾಜ್ಯ ಪತ್ರಿಕೆಯ ಭಾಗ–IV-A (ಸಂಖ್ಯೆ:1291)ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯ ಪತ್ರವನ್ನು ದಿನಾಂಕ: 22.11.2016ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ಕರಡಿನ ಬಗ್ಗೆ ಯಾವುದೇ **ಆಕ್ಷೇಪಣೆ** ಮತ್ತು ಸಲಹೆಗಳು ಸ್ವೀಕೃತವಾಗದಿರುವುದರಿಂದ;

ಈಗ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 8ನೇ ಪ್ರಕರಣದೊಂದಿಗೆ ಓದಿಕೊಂಡು 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಕೆಳಕಂಡಂತೆ ನಿಯಮಗಳನ್ನು ರಚಿಸುತ್ತದೆ ಎಂದರೆ:-

## ನಿಯಮಗಳು

1. **ಹೆಸರು ಮತ್ತು ಪ್ರಾರಂಭ** ,- (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ನಡತೆ) (ತಿದ್ದುಪಡಿ) ನಿಯಮಗಳು, 2016 ಎಂದು ಕರೆಯತಕ್ಕದ್ದು.

(2)ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು

2. **ನಿಯಮ 21ಕ್ಕೆ ತಿದ್ದುಪಡಿ**:- ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 21ರ ಉಪನಿಯಮ (4)ರ ಖಂಡ (1)ರ ಉಪಖಂಡ (ಬಿ)ರ ಪರಂತುಕದಲ್ಲಿನ "**ತನ್ನ ಮೂರು ತಿಂಗಳ ಒಟ್ಟು ಉಪಲಬ್ಧಗಳನ್ನು ಮೀರದಷ್ಟು ಮೊತ್ತವನ್ನು**" ಎಂಬ ಪದಗಳಿಗೆ ಬದಲಾಗಿ "**ತನ್ನ ಆರು ತಿಂಗಳ ಉಪಲಬ್ಧಗಳನ್ನು ಮೀರದಷ್ಟು ಮೊತ್ತವನ್ನು**" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri. M.R 05.01.17

(ಗಾಯತ್ರಿ ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಿಸಿ ಇದರ

2...

1000 ಪ್ರತಿಗಳನ್ನು ಒದಗಿಸಲು.

ಪ್ರತಿ:

1. ಮಹಾಲೇಖಪಾಲರು, (G&SSA) (E&RS-A) (A&E) ಕರ್ನಾಟಕ, ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
6. ಮುಖ್ಯಮಂತ್ರಿಯವರ ಕಾರ್ಯದರ್ಶಿಯವರು
7. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6ನೇ ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು-560 009
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣ, ಬಹುಮಹಡಿ ಕಟ್ಟಡ, ಬೆಂಗಳೂರು 560001
15. ಎಲ್ಲಾ ಇಲಾಖಾ ಮುಖ್ಯಸ್ಥರು
16. ಎಲ್ಲಾ ಪ್ರಾದೇಶಿಕ ಆಯುಕ್ತರು
17. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
18. ಸರ್ಕಾರದ ಎಲ್ಲಾ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖಾಧಿಕಾರಿಗಳು
20. ಸಚಿವ ಸಂಪುಟ ಶಾಖೆ
21. ಶಾಖಾ ರಕ್ಷಾ ಕಡತ/ಅಧಿಕ ಪ್ರತಿಗಳು

**(*ಮುಖ ಪತ್ರದೊಂದಿಗೆ)**